ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಖಾಲಿ ಇರುವ ಮುಖ್ಯೋಪಾಧ್ಯಾಯರ ಮತ್ತು ಪ್ರಾಂಶುಪಾಲರ ಹುದ್ದೆಗಳ ಬಗ್ಗೆ

ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-

813 (977) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರಿ ಪ್ರೌಢಶಾಲೆಗಳಲ್ಲಿ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಮುಖ್ಯೋಪಾಧ್ಯಾಯರು ಮತ್ತು ಪ್ರಾಂಶುಪಾಲರ ಹುದ್ದೆಗಳು ಎಷ್ಟು ; (ಮಾಹಿತಿ ನೀಡುವುದು)

(ಆ) ಸರ್ಕಾರಿ ಪ್ರೌಢಶಾಲೆಗಳಲ್ಲಿ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಪ್ರತಿ ವರ್ಷ ಮುಖ್ಯೋಪಾಧ್ಯಾಯರು ಮತ್ತು ಪ್ರಾಂಶುಪಾಲರ ಹುದ್ದೆಗಳನ್ನು ತುಂಬಲು ಸರ್ಕಾರಕ್ಕೆ ಇರುವ ತೊಂದರೆ ಏನು ; (ಮಾಹಿತಿ ನೀಡುವುದು)

(ಇ) ಬಹಳಷ್ಟು ದೀರ್ಘಕಾಲ ಈ ಹುದ್ದೆಗಳು ಖಾಲಿ ಇದ್ದಲ್ಲಿ, ಶೈಕ್ಷಣಿಕ ಪ್ರಗತಿ ಕುಂಠಿತವಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?